



ಅರುಣ ಪಿ. ಭಟ್ಟ

# ವಾರ ಭವಿಷ್ಯ: 04.11.2021ರಿಂದ 10.11.2021ರವರೆಗೆ




ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು ದೊರೆಯುವ ಸಾಧ್ಯತೆ. ದೇವತಾ ಆರಾಧನೆಗೆ ನಿಮ್ಮ ಶ್ರಮ ಹಾಕುತ್ತೀರಿ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ಈ ಅವಧಿಯಲ್ಲಿ ಕೆಮ್ಮು ನೆಗಡಿ ಕಾಡಬಹುದು. ವಾರದ ಮಧ್ಯ ಭಾಗದಲ್ಲಿ ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆ ಇದೆ. ಶುಭದಿನ 08. ಕನಕಧಾರಾ ಸ್ತೋತ್ರ ಪಠಣಮಾಡಿರಿ.

---

ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಕಾಗದಪತ್ರಗಳನ್ನು ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಂತೆ ಸನ್ನಿವೇಶಗಳು ನಿಮಗೆ ಪೂರಕ ಆಗಲಿದೆ. ಭುಜದ ನೋವು, ತಲೆ ನೋವು ಕಾಡಲಿದೆ. ವೈಯಕ್ತಿಕ ಸಂಬಂಧದಲ್ಲಿ ಕೆಲವು ಕಹಿ ಬೆಳವಣಿಗೆಗಳು ಆಗಲಿವೆ. ವಾರದ ಅಂತ್ಯಕ್ಕೆ ಸರಿಯುತ್ತಾ ಕುಟುಂಬದವರ ಬೆಂಬಲ ದೊರೆಯಲಿದೆ. ಶುಭದಿನ 05. ಸೌಂದರ್ಯಲಹರಿ ಪಠಿಸಿರಿ.




---




ವ್ಯಾಪಾರದಲ್ಲಿ ಪ್ರಗತಿ. ಪ್ರತಿಷ್ಠಿತ ಸಂಸ್ಥೆಯೊಂದರ ಜತೆಗೆ ಮಹತ್ವದ ಒಪ್ಪಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಈ ವಾರ ಆರೋಗ್ಯದಲ್ಲಿ ಸಮಸ್ಯೆ ಕಾಡುವುದಿಲ್ಲ. ಇದರಿಂದ ಎಷ್ಟೇ ಚಟುವಟಿಕೆ ಒತ್ತಡದ ಕೆಲಸ ಇದ್ದರೂ ಆರಾಮವಾಗಿ ಪೂರೈಸಲು ನಿಮ್ಮಿಂದ ಸಾಧ್ಯವಾಗಲಿದೆ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡಲು ಮನಸು ನಿರ್ಧರಿಸುತ್ತದೆ. ಶುಭದಿನ 07. ಕಾಲಭೈರವನ ಸೇವೆ ಮಾಡಿರಿ.

---

ವಾರದ ಶುರುವಿನಲ್ಲಿ ಅಸಮಾಧಾನದ ಘಟನೆಗಳು ಸಂಭವಿಸುವ ಸಾಧ್ಯತೆ ಇದೆ. ಆದರೆ ಈ ಸಮಯದಲ್ಲಿ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಕೌಟುಂಬಿಕವಾಗಿ ಕೆಲ ಜವಾಬ್ದಾರಿಗಳನ್ನು ನೀವು ವಹಿಸಿಕೊಳ್ಳಬೇಕಾಗುತ್ತದೆ. ವಾರದ ಮಧ್ಯಭಾಗ ಕಳೆದ ನಂತರ ಕೋರ್ಟ್ ವ್ಯಾಜ್ಯಗಳು ಇದ್ದಲ್ಲಿ ನಿಮ್ಮ ಪರವಾದ ತೀರ್ಪು ಬರುವ ಸಾಧ್ಯತೆಗಳು ಹೆಚ್ಚಿವೆ. ಶುಭದಿನ 08. ಲಿಂಗಾಷ್ಟಕ ಪಠಿಸಿರಿ.




---




ಆದಾಯ ಮೂಲ ಹೆಚ್ಚಿಸಿಕೊಳ್ಳುವ ಕಡೆಗೆ ನಿಮ್ಮ ಗಮನ ಕೇಂದ್ರೀಕೃತವಾಗಿರುತ್ತದೆ. ಇದರ ಜತೆಗೆ ಇಷ್ಟು ಕಾಲ ನೀವು ಅನುಸರಿಸಿಕೊಂಡು ಬಂದ ಪದ್ಧತಿಯಲ್ಲಿ ಬದಲಾವಣೆ ಮಾಡಲು ಮುಂದಾಗುತ್ತೀರಿ. ಆದಾಯದ ಮೂಲಕವೇ ಅಗತ್ಯ ಇರುವ ಕೆಲವು ಸಲಕರಣೆಗಳನ್ನು ಖರೀದಿಸುತ್ತೀರಿ. ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮವಾದ ಪ್ರಗತಿ ಇದೆ. ಶುಭದಿನ 10. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.

---

ಉದ್ಯೋಗಸ್ಥರಿಗೆ ವಾರದ ಶುರುವಿನಲ್ಲಿ ಯಶಸ್ಸು ದೊರೆಯಲಿದೆ. ಈ ಹಿಂದೆ ನೀವು ಹಾಕಿದ ಶ್ರಮಕ್ಕೆ ಒಂದೊಂದಾಗಿ ಯಶಸ್ಸು ದೊರೆಯಲು ಆರಂಭವಾಗುತ್ತದೆ. ಈ ಸಮಯದಲ್ಲಿ ಆರೋಗ್ಯವು ಉತ್ತಮವಾಗಿರುತ್ತದೆ. ನಿಮ್ಮ ಖರ್ಚು ವೆಚ್ಚಗಳು ಅಧಿಕವಾಗಲಿವೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆರೋಗ್ಯದಲ್ಲಿ ಸ್ವಲ್ಪ ಮಟ್ಟಿಗೆ ಸಮಸ್ಯೆಗಳು ಎದುರಾಗಬಹುದು. ಶುಭದಿನ 04. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




---




ಉನ್ನತ ಶಿಕ್ಷಣದಲ್ಲಿ ಪ್ರಗತಿ ಇದೆ. ಕುಟುಂಬ ಸದಸ್ಯರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಇದರಿಂದ ಮನೆಯಲ್ಲಿ ಸಂತೋಷದ ವಾತಾವರಣ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಉದ್ಯೋಗಸ್ಥರಿಗೆ, ಉದ್ಯಮಿಗಳಿಗೆ ಅತ್ಯುತ್ತಮವಾದ ಸಮಯ. ರೂಪಿಸಿದ ಯೋಜನೆಗಳನ್ನು ಜಾರಿಗೆ ತರಲಿದ್ದೀರಿ. ಮೇಲಧಿಕಾರಿಗಳ ಜತೆಗೆ ಉತ್ತಮ ಸಂಪರ್ಕ ಸಾಧಿಸುತ್ತೀರಿ. ಶುಭದಿನ 07. ವಿಷ್ಣು ಸಹಸ್ರನಾಮ ಪಠಿಸಿರಿ.

---

ವಾರದ ಶುರುವಿನಲ್ಲಿ ಕೌಟುಂಬಿಕ ಸಂಗತಿಗಳಲ್ಲಿ ಹಿನ್ನಡೆ. ಇದರಿಂದ ಬಹಳ ಚಿಂತೆಗೆ ಗುರಿಯಾಗುತ್ತೀರಿ. ಹೆಚ್ಚಿನ ಹಣ ಖರ್ಚಾಗಲಿದೆ. ಆರೋಗ್ಯ ಸಮಸ್ಯೆ ಎದುರಾಗಬಹುದು. ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ತೆಗೆದುಕೊಳ್ಳಬೇಕಾಗುತ್ತದೆ. ವಾರದ ಮಧ್ಯಭಾಗದಲ್ಲಿ ವ್ಯಾಪಾರ ಉದ್ಯಮ ವಿಸ್ತರಣೆಗೆ ಹೆಚ್ಚಿನ ಅವಕಾಶಗಳು ದೊರೆಯಲಿವೆ. ಶುಭದಿನ 10. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.




---




ವಾರದ ಆರಂಭದಲ್ಲಿ ಗೃಹಾಲಂಕಾರದ ಕಡೆಗೆ ನಿಮ್ಮ ಗಮನ ಹೆಚ್ಚಿರುತ್ತದೆ. ಒಟ್ಟಾರೆ ನಿಮ್ಮ ಮನೆಯ ಸ್ವರೂಪವನ್ನು ಬದಲಾಯಿಸುವುದರಲ್ಲಿ ತೊಡಗಿಸಿಕೊಳ್ಳುತ್ತೀರಿ. ಆರೋಗ್ಯದಲ್ಲಿ ವ್ಯತ್ಯಾಸ ಆಗಬಹುದು. ವಾರದ ಅಂತ್ಯಕ್ಕೆ ಸರಿಯುತ್ತಾ ಶೈಕ್ಷಣಿಕ ಸಂಗತಿಗಳಿಗೆ ಹೆಚ್ಚಿನ ಮಹತ್ವ ನೀಡುತ್ತೀರಿ. ಆದಾಯ ಹೆಚ್ಚಿಸಲು ಹಲವು ಅವಕಾಶಗಳು ದೊರೆಯಲಿವೆ. ಶುಭದಿನ 06. ಆಂಜನೇಯ ಸ್ತೋತ್ರ ಪಠಿಸಿರಿ.

---

ಕುಟುಂಬ ವಿಚಾರಗಳಿಗೆ ಹೆಚ್ಚು ಪ್ರಾಶಸ್ತ್ಯ ನೀಡಲಿದ್ದೀರಿ. ಕಲೆ, ಸಿನಿಮಾ ಕ್ಷೇತ್ರದವರು ಸಿಕ್ಕಾಪಟ್ಟೆ ಸ್ಪರ್ಧೆ ಎದುರಿಸಬೇಕಾಗುತ್ತದೆ. ನಿಮ್ಮ ಆಲೋಚನೆಯನ್ನು ಗರಿಷ್ಠ ಮಟ್ಟಕ್ಕೆ ಬಳಸಬಹುದು. ವೈಯಕ್ತಿಕ ಸಂಬಂಧದಲ್ಲಿ ಬಾಂಧವ್ಯ ಗಟ್ಟಿ ಆಗುವುದರಿಂದ ಹೆಚ್ಚು ಸಂತುಷ್ಟರಾಗಲಿದ್ದೀರಿ. ಉದ್ಯೋಗದಲ್ಲಿ ಬಹಳ ಮುಖ್ಯವಾದ ಬೆಳವಣಿಗೆ ಎದುರು ನೋಡಬಹುದು. ಶುಭದಿನ 05. ಶ್ರೀ ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




---




ಈ ಹಿಂದೆ ನೀವು ಹಾಕಿದ ಶ್ರಮಕ್ಕೆ ಫಲಿತಾಂಶ ದೊರೆಯಲಿದೆ. ತಾಜಾತನ ಉಳಿಸಿಕೊಳ್ಳಲಿದ್ದೀರಿ. ಹೊಸ ಉತ್ಸಾಹದಿಂದ ಪುಟಿಯಲಿದ್ದೀರಿ. ಓದಿನಲ್ಲಿ ನಿಮ್ಮ ಏಕಾಗ್ರತೆ ಹೆಚ್ಚಳವಾಗಲಿದೆ. ವೈಯಕ್ತಿಕ ಬಾಂಧವ್ಯ ಗಟ್ಟಿಯಾಗಲಿದೆ. ವಾರದ ಮಧ್ಯದಲ್ಲಿ ಹಳೇ ವ್ಯವಹಾರದ ವಿವಾದಗಳು ತಲೆ ಎತ್ತುವ ಸಾಧ್ಯತೆಗಳು ಇವೆ. ಹಣ ಮೀಸಲಿಡಲು ಆಲೋಚನೆ ಮಾಡುತ್ತೀರಿ. ಶುಭದಿನ 05. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.

---

ಆರೋಗ್ಯದ ಬಗ್ಗೆ ನಿಮ್ಮ ಗಮನ ಹೆಚ್ಚಾಗಲಿದೆ. ನೀವು ಹಾಕಿದ ಶ್ರಮಕ್ಕೆ ಅತ್ಯುತ್ತಮ ಫಲಿತಾಂಶ ದೊರೆಯಲು ಆರಂಭ ಆಗುತ್ತದೆ. ದೈಹಿಕವಾಗಿ ಸದೃಢರಾಗಲಿದ್ದೀರಿ. ಉದ್ಯಮಿಗಳು ಸ್ಥಳೀಯ ಮಾರುಕಟ್ಟೆ ಸಮೀಕ್ಷೆ ಮಾಡಲಿದ್ದೀರಿ. ಉತ್ಪನ್ನಗಳಿಗೆ ಮಾರುಕಟ್ಟೆ ವಿಸ್ತರಿಸಲು ಹೆಚ್ಚು ಶ್ರಮಿಸಲಿದ್ದೀರಿ. ಇದರಿಂದ ನಿಮಗೆ ಅನುಕೂಲ ಆಗಲಿದೆ. ಶುಭದಿನ 04. ಹನುಮಾನ್ ಚಾಲೀಸ್ ಓದಿರಿ.

